# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 58 |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು |
| ಉತ್ತರಿಸಬೇಕಾದ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರತಿ ವರ್ಷದಂತೆ ಬೆಂಗಳೂರು ನಗರದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸದಿರಲು ಕಾರಣಗಳೇನು; | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಚರಿಸಲ್ಪಡುತ್ತಿರುವ ಜಯಂತಿಗಳ ಬಗ್ಗೆ ಕಳೆದ ವಿಧಾನ ಪರಿಷತ್ ಅಧಿವೇಶನದಲ್ಲಿ ಚರ್ಚೆಗೆ ಬಂದ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ಆಚರಿಸುವ ರಾಜ್ಯಮಟ್ಟದ ಜಯಂತಿಗಳನ್ನು ಜಿಲ್ಲೆಗಳಲ್ಲಿ ಆಚರಿಸಿದರೆ ಮಹಾಪುರುಷರ ವಿಚಾರಗಳನ್ನು ಬೇರೆ ಬೇರೆ ಜಿಲ್ಲೆಗಳಲ್ಲಿಯೂ ಪ್ರಚಾರಪಡಿಸಿದಂತಾಗುತ್ತದೆ ಎಂದು ತಿಳಿಸುತ್ತಾ, ಈ ಬಗ್ಗೆ ಕ್ರಮವಹಿಸಲಾಗುವುದು ಎಂದು ತಿಳಿಸಲಾಗಿದೆ.<br><br>ಈ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಕಸಂವಾ 114 ಕಸಧ 2022, ದಿನಾಂಕ: 25.04.2022ರಲ್ಲಿ ಮಹಾಪುರುಷರ ಮೊದಲ ಬಾರಿಗೆ ರಾಜ್ಯಮಟ್ಟದ ಜಯಂತಿಯನ್ನು ಬೆಂಗಳೂರಿನಲ್ಲಿ, ತದನಂತರದ ವರ್ಷಗಳಲ್ಲಿ ಆಯಾ ಜಿಲ್ಲೆಗಳಲ್ಲಿ ಆಚರಿಸಲು ಆದೇಶಿಸಲಾಗಿರುತ್ತದೆ. |
| ಆ | ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಣೆಯನ್ನು ಬೆಂಗಳೂರು ಬದಲು ಉಡುಪಿಗೆ ವರ್ಗಾಯಿಸಲು ಕಾರಣಗಳೇನು; | ಈಗಾಗಲೇ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಬೆಂಗಳೂರಿನಲ್ಲಿ ಆಚರಿಸಲಾಗಿರುವುದರಿಂದ ಹಾಗೂ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಇತರೆ ಜಿಲ್ಲೆಗಳಲ್ಲಿ ರಾಜ್ಯಮಟ್ಟದ ಜಯಂತಿಯನ್ನು ಆಚರಿಸಿದಲ್ಲಿ ಜಿಲ್ಲೆಗಳಲ್ಲಿಯೂ ಸಹ ಸದರಿ ಮಹಾಪುರುಷರ ವಿಚಾರಗಳನ್ನು ತಲುಪಿಸಿದಂತಾಗುತ್ತದೆ ಎಂಬ ದೃಷ್ಟಿಯಿಂದ ಈ ವರ್ಷದ ರಾಜ್ಯಮಟ್ಟದ ಶ್ರೀ ಕೃಷ್ಣ ಜಯಂತಿಯನ್ನು ಉಡುಪಿಯಲ್ಲಿ ಆಚರಿಸಲಾಗಿರುತ್ತದೆ. |
| ಇ | ಮುಂಬರುವ ವರ್ಷದಿಂದ ರಾಜಧಾನಿ ಬೆಂಗಳೂರಿನಲ್ಲೇ ಅದ್ದೂರಿಯಾಗಿ ಶ್ರೀ ಕೃಷ್ಣ ಜನ್ಮಾಷ್ಟಮಿ ಆಚರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಮೇಲಿನ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ, ಶ್ರೀ ಕೃಷ್ಣ ಜನ್ಮಾಷ್ಟಮಿಯ ಸಂದೇಶವನ್ನು ಕ್ರಮವಾಗಿ ರಾಜ್ಯದ ಎಲ್ಲಾ ಜನರಿಗೂ ಎಲ್ಲಾ ಜಿಲ್ಲೆಗಳಲ್ಲೂ ತಲುಪಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಕಸಂವಾ 60 ಕವಿಸ 2022

**(ವಿ. ಸುನಿಲ್ ಕುಮಾರ್)**
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು